# ಕರ್ನಾಟಕ ವಿಧಾನ ಪರಿಷತ್ತು

ಸದಸ್ಯರ ಹೆಸರು : ಶ್ರೀ. ಎಂ.ಎಲ್ ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 1097

ಉತ್ತರ ದಿನಾಂಕ : 22.09.2022

ಉತ್ತರಿಸುವವರು : ಮಾನ್ಯ ಮುಖ್ಯಮಂತ್ರಿಗಳು

<table>
<tr><th>ಕ್ರ.ಸ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿ ಕುಡಿಯುವ ನೀರಿನ ಅಭಾವ ಉಂಟಾಗಿದ್ದು, ಸರ್ಕಾರದ ಮಹತ್ವಾಕಾಂಕ್ಷೆ ಯೋಜನೆಯಾದ ಶುದ್ಧ ಕುಡಿಯುವ ನೀರಿನ ಘಟಕಗಳ ಸ್ಥಾಪನೆ ಯೋಜನೆಯಡಿಯಲ್ಲಿ ಭ್ರಷ್ಟಾಚಾರ ಆಗುತ್ತಿರುವುದು. ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಎಷ್ಟು ಪ್ರಕರಣಗಳು ಬೆಳಕಿಗೆ ಬಂದಿವೆ; ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು: (ಸಂಪೂರ್ಣ ಮಾಹಿತಿ ನೀಡುವುದು).</td><td>ಶುದ್ಧ ಕುಡಿಯುವ ನೀರಿನ ಘಟಕಗಳ ಸ್ಥಾಪನೆಯಲ್ಲಿ ಯಾವುದೇ ಭ್ರಷ್ಟಾಚಾರದ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.</td></tr>
<tr><td>ಆ)</td><td>ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಕಳೆದ 3 ವರ್ಷಗಳಲ್ಲಿ ಶುದ್ಧ ನೀರಿನ ಘಟಕಗಳನ್ನು ಸ್ಥಾಪಿಸಲು ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ; ಯಾವ ಯಾವ ಗ್ರಾಮಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲಾಗಿದೆ: ಒಂದು ಘಟಕಕ್ಕೆ ತಗಲಿರುವ ವೆಚ್ಚವೆಷ್ಟು; (ಸಂಪೂರ್ಣ ಮಾಹಿತಿ ನೀಡುವುದು)</td><td>ಕಳೆದ 3 ವರ್ಷಗಳಿಂದ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲು ಬಿಡುಗಡೆ ಮಾಡಲಾದ ಅನುದಾನದ ವಿವರಗಳು ಈ ಕೆಳಕಂಡಂತಿದೆ;
<table>
<tr><th>ಕ.ಸ.</th><th>ಜಿಲ್ಲೆ</th><th>ಬಿಡುಗಡೆಯಾದ ಅನುದಾನ (ರೂ. ಲಕ್ಷಗಳಲ್ಲಿ)</th></tr>
<tr><td>1</td><td>ಕೋಲಾರ</td><td>142.80</td></tr>
<tr><td>2</td><td>ಚಿಕ್ಕಬಳ್ಳಾಪುರ</td><td>1042.80</td></tr>
<tr><td></td><td>ಒಟ್ಟು</td><td>1185.60</td></tr>
</table>
ಗ್ರಾಮವಾರು ವಿವರವನ್ನು ಅನುಬಂಧ-1&2ರಲ್ಲಿ ನೀಡಿದೆ. ಒಂದು ಘಟಕಕ್ಕೆ ಅಂದಾಜು ರೂ.15.96 ಲಕ್ಷಗಳಾಗುತ್ತದೆ.</td></tr>
<tr><td>ಇ)</td><td>ಮಾರ್ಕಂಡೇಯ ಜಲಾಶಯದಿಂದ ಕುಡಿಯುವ ನೀರು ಸರಬರಾಜು ಯೋಜನೆಗಾಗಿ ಬಿಡುಗಡೆಯಾಗಿರುವ ಅನುದಾನವೆಷ್ಟು; ಈ ಯೋಜನೆಯು 6 ವಲಯಗಳಿಗೆ ನೀರು ಹರಿಸುವ ಯೋಜನೆಯಾಗಿದ್ದು, 6 ವಲಯಗಳಿಗೂ ನೀರು ಪೂರೈಕೆಯಾಗುತ್ತಿದೆಯೇ; ಆಗದಿದ್ದಲ್ಲಿ, ನೀರು ಪೂರೈಸಲು ಸರ್ಕಾರ ಕೈಗೊಂಡ ಕ್ರಮಗಳೇನು; ಸದರಿ ಕಾಮಗಾರಿಯು ಯಾವ ಹಂತದಲ್ಲಿದೆ? (ಸಂಪೂರ್ಣವಾದ ಮಾಹಿತಿ ನೀಡುವುದು)</td><td>ಮಾರ್ಕಂಡೇಯ ಜಲಾಶಯದಿಂದ ಕುಡಿಯುವ ನೀರು ಸರಬರಾಜು ಯೋಜನೆಗಾಗಿ ರೂ.4148.43 ಲಕ್ಷಗಳ ಅನುದಾನ ಬಿಡುಗಡೆಯಾಗಿರುತ್ತದೆ. ಮಾರ್ಕಂಡೇಯ ಯೋಜನೆಗಾಗಿ ಅಳವಡಿಸಲಾಗಿದ್ದ ಏರುಕೊಳವೆ ಮತ್ತು ವಿತರಣಾ ಕೊಳವೆಗಳು 2018 ರವರೆಗೆ ತೀವ್ರ ಬರಗಾಲ ಇದ್ದುದರಿಂದ ಹಾಳಾಗಿದ್ದು, ನಂತರದಲ್ಲಿ ಡ್ಯಾಂನಲ್ಲಿ ನೀರು ಶೇಖರಣೆಯಾಗಿದ್ದು ವಲಯ-1ರಲ್ಲಿ ಇದುವರೆವಿಗೂ ಪೈಪ್‌ಲೈನ್ ದುರಸ್ತಿ ಕಾರ್ಯ ಕೈಗೊಂಡು 23 ಗ್ರಾಮಗಳಿಗೆ ನೀರು ಪೂರೈಕೆಯಾಗುತ್ತಿದೆ. ಉಳಿದ 5 ವಲಯಗಳ ಪೈಕಿ ಜಲಾಶಯದಲ್ಲಿರುವ ನೀರಿನ ಲಭ್ಯತೆಯ ಆಧಾರದ ಮೇಲೆ ಕುಡಿಯುವ ನೀರು ಸರಬರಾಜು ಮಾಡಲು ಕ್ರಮ ಜರುಗಿಸಲಾಗುತ್ತಿದೆ.</td></tr>
</table>

ಸಂ:ಗ್ರಾಕುನೀ&ನೈಇ 463ಗ್ರಾನೀಸ(4)2022

(ಬಸವರಾಜ ಬೊಮ್ಮಾಯಿ)

ಮುಖ್ಯಮಂತ್ರಿ